# ಕರ್ನಾಟಕ ಲೋಕಾಯುಕ್ತ

ನಂ. ಕಂಪ್ಲೆಂಟ್/ಉಪಲೋಕ್/ಬಿಡಿ/1066/2021 ಬಹುಮಹಡಿಗಳ ಕಟ್ಟಡ,
ಮಂಡನಾಧಿಕಾರಿಗಳ ಶಾಖೆ, ಪಿ.ಒ. ಎ.ಆರ್.ಇ.17 ಡಾ: ಅಂಬೇಡ್ಕರ್ ವೀಧಿ,ಬೆಂಗಳೂರು,
ದಿನಾಂಕ: 02/02/2022

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 12(3)ರ ಅನ್ವಯ ವರದಿ

*****

ವಿಷಯ: ಸರ್ಕಾರಿ ನೌಕರರಾದ ಶ್ರೀ ಎನ್. ಎಸ್. ಚಂದ್ರಪ್ಪ ಬಿನ್ ಶೇಜಪ್ಪ, ಕಂದಾಯ ನಿರೀಕ್ಷಕರು ಮಾಯಕೊಂಡ ಹೋಬಳಿ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಕರ್ತವ್ಯ ಲೋಪ/ದುರ್ನಡತೆ ಎಸಗಿರುವ ಬಗ್ಗೆ.

*****

1) ಪೊಲೀಸ್ ಅಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಪೂರ್ವ ವಲಯ, ದಾವಣಗೆರೆ ಇವರು ದಾವಣಗೆರೆ ಜಿಲ್ಲೆಯ ಭ್ರಷ್ಟಾಚಾರ ನಿಗ್ರಹ ದಳ ಪೊಲೀಸ್ ಠಾಣೆಯ ಪೊಲೀಸ್ ಉಪಾಧೀಕ್ಷಕರು (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ.) ಸಲ್ಲಿಸಿದ ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದಾಗ ವರದಿಯಲ್ಲಿ ಶ್ರೀ ಎನ್. ಎಸ್. ಚಂದ್ರಪ್ಪ ಬಿನ್ ಶೇಜಪ್ಪ, ಕಂದಾಯ ನಿರೀಕ್ಷಕರು ಮಾಯಕೊಂಡ ಹೋಬಳಿ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ಇವರನ್ನು ಶ್ರೀ ರವಿ ಕುಮಾರ್ ಎಸ್ ಬಿನ್ ಸಿದ್ದಲಿಂಗಪ್ಪ, ವಾಸ: ಅಣಬೇರು ಗ್ರಾಮ, ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಭೇಟಿ ಮಾಡಿದಾಗ ಲಂಚದ ಹಣಕ್ಕೆ ಬೇಡಿಕೆ ಇಟ್ಟು, ಅದನ್ನು ಪಡೆದು ದುರ್ನಡತೆ ತೋರಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 7(2) ರನ್ವಯ ಸ್ವಯಂ ಪ್ರೇರಿತ ತನಿಖೆ ಕೈಗೊಂಡಿರುತ್ತಾರೆ.

2) **ದೂರಿನ ಸಂಕ್ಷಿಪ್ತ ವಿವರಣೆ:-** ದೂರುದಾರರ ತಂದೆ ಹೆಸರಿನಲ್ಲಿರುವ ಮಾಯಕೊಂಡ ಹೋಬಳಿ, ಗುಜ್ಜಕೊಂಡ ಗ್ರಾಮದ ಸರ್ವೆ ನಂ. 14/5 ರಲ್ಲಿ 02 ಎಕರೆ ಜಮೀನು ಇದ್ದು ಸದರಿ ಜಮೀನನ್ನು ಸರ್ಕಾರಿ ಸರ್ವೆಯರ್‌ರವರಿಂದ ಅಳತೆ ಮಾಡಿಸಿ ಹದ್ದುಬಸ್ತು ಮಾಡಿದ್ದು, ಸದರಿ ಜಮೀನಿನ ಅಕ್ಕಪಕ್ಕದ ಜಮೀನಿನ ಮಾಲೀಕರು

ಹದ್ದುಬಸ್ತು ಮಾಡಿ ಹಾಕಿದ್ದ ಗುರುತು ಕಲ್ಲುಗಳನ್ನು ಕಿತ್ತು ಹಾಕಿದ್ದರಿಂದ ಅವರ ಜಮೀನನ್ನು ಬಿಡಿಸಿಕೊಡುವಂತೆ ದಾವಣಗೆರೆ ಜಿಲ್ಲಾಧಿಕಾರಿಗಳಿಗೆ ದೂರು ನೀಡಿದ್ದು, ಸದರಿ ಕಛೇರಿಯಿಂದ ಮಾಯಕೊಂಡ ರಾಜಸ್ವ ನಿರೀಕ್ಷಕರ ಕಛೇರಿಗೆ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದ್ದು, ಈ ಸಂಬಂಧ ಎದುರುದಾರರು ವರದಿಯನ್ನು ಸಲ್ಲಿಸಲು ಆರು ಸಾವಿರ ರೂಪಾಯಿ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದು ಇರುತ್ತದೆ. ಆದ್ದರಿಂದ ದೂರುದಾರರು ಸದರಿ ಲಂಚದ ಹಣ ನೀಡಲು ಇಷ್ಟವಿಲ್ಲದ ಕಾರಣ ದಿನಾಂಕ 28/02/2019 ರಂದು ದೂರನ್ನು ನೀಡಿರುತ್ತಾರೆ. ಈ ಬಗ್ಗೆ ದಾವಣಗೆರೆ ಜಿಲ್ಲೆಯ ಭ್ರಷ್ಟಾಚಾರ ನಿಗ್ರಹದಳ ಪೋಲೀಸ್ ಠಾಣೆಯ ಅಧಿಕಾರಿಯವರು ತಮ್ಮ ಠಾಣೆಯ ಗುನ್ನೆ ನಂ. 02/2019 ರಲ್ಲಿ ಪ್ರಕರಣ ನೋಂದಾಯಿಸಿಕೊಂಡಿರುತ್ತಾರೆ.

3) ತನಿಖಾಧಿಕಾರಿಗಳು ದಿನಾಂಕ 28/02/2019 ರಂದು ನೆರಳು ಸಾಕ್ಷಿ ಹಾಗೂ ಸಹ ಪಂಚರನ್ನು ಠಾಣೆಗೆ ಬರ ಮಾಡಿಕೊಂಡು ದೂರುದಾರರನ್ನು ಪರಿಚಯಿಸಿ, ಅವರಿಂದ ದೂರಿನ ವಿಷಯವನ್ನು ತಿಳಿದ ನಂತರ ಎದುರುದಾರರು ಲಂಚದ ಹಣ ಕೇಳುವ ಬಗ್ಗೆ ದೂರುದಾರರು ಮೊಬೈಲ್‌ನಲ್ಲಿ ವಾಯ್ಸ್ ರೆಕಾರ್ಡ್ ಮಾಡಿದ್ದು, ಸರ್ಕಾರಿ ಕೆಲಸ ನಿರ್ವಹಿಸಲು ಲಂಚದ ಹಣಕ್ಕೆ ಒತ್ತಾಯ ಮಾಡಿರುವುದಾಗಿ ತಿಳಿಸಿದ್ದು, ರೆಕಾರ್ಡ್ ಮಾಡಿದ ಸಂಭಾಷಣೆಯನ್ನು ಕಂಪ್ಯೂಟರ್‌ಗೆ ಹಾಕಿ ಸಿ.ಡಿ.ಗೆ ವರ್ಗಾಯಿಸಿ, ಅದನ್ನು ಪ್ಲೇ ಮಾಡಿ ನೋಡಲಾಗಿ ದೂರುದಾರರು ಮತ್ತು ಎದುರುದಾರರು ನಡೆಸಿರುವ ಸಂಭಾಷಣೆಗಳು ಕನ್ನಡ ಭಾಷೆಯಲ್ಲಿರುತ್ತವೆ. ಸದರಿ ಸಂಭಾಷಣೆಯನ್ನು ಸಿ.ಡಿ.ಗೆ ವರ್ಗಾಯಿಸಿ ಲಿಪೀಕರಣ ಮಾಡಿ, ಅಮಾನತ್ ಪಡಿಸಿಕೊಂಡಿರುತ್ತಾರೆ. ನಂತರ ಲಂಚದ ಹಣ ರೂ. 4,000/-ಗಳನ್ನು ದೂರುದಾರರು ಹಾಜರುಪಡಿಸಿದ್ದು, ಅವುಗಳ ಮುಖಬೆಲೆ ಮತ್ತು ನೋಟಿನ ಸಂಖ್ಯೆ ಪ್ರತ್ಯೇಕ ಹಾಳೆಯಲ್ಲಿ ನಮೂದಿಸಿ ಪಂಚರ ಮತ್ತು ತನಿಖಾಧಿಕಾರಿಗಳ ಸಹಿ ಪಡೆದಿರುತ್ತಾರೆ. ಸದರಿ ಹಣಕ್ಕೆ ಪಿನಾಪ್ತಲಿನ್ ಪೌಡರ್ ಲೇಪಿಸಿ, ಸೋಡಿಯಂ ಕಾರ್ಬೋನೇಟ್ ದ್ರಾವಣ ತಯಾರಿಸಿ, ಸದರಿ ದ್ರಾವಣದಲ್ಲಿ ನೋಟುಗಳಿಗೆ ಪಿನಾಪ್ತಲಿನ್ ಪೌಡರ್ ಲೇಪಿಸಿದ ಪಂಚನ ಕೈ ಬೆರಳುಗಳನ್ನು ದ್ರಾವಣದಲ್ಲಿ ಅದ್ದಿ ತೊಳೆದಾಗ, ಅದು ತಿಳಿ ಗುಲಾಬಿ ಬಣ್ಣಕ್ಕೆ ಬಂದಿರುತ್ತದೆ. ಈ ಬಗ್ಗೆ ಮಾದರಿ ದ್ರಾವಣ ಹಾಗೂ ಗುಲಾಬಿ ಬಣ್ಣಕ್ಕೆ ತಿರುಗಿದ ದ್ರಾವಣವನ್ನು ಪ್ರತ್ಯೇಕವಾಗಿ ವಶಪಡಿಸಿಕೊಂಡು,

ಹಂತ ಹಂತವಾಗಿ ಫೋಟೋಗಳನ್ನು ತೆಗೆಸಿ, ಪ್ರಕರಣದ ಮಾಹಿತಿ ಗೌಪ್ಯತೆಯನ್ನು ಕಾಪಾಡಿಕೊಳ್ಳಲು ತನಿಖಾಧಿಕಾರಿಯವರು ಸೂಚಿಸಿರುತ್ತಾರೆ. ಶ್ರೀ ಭೀರಪ್ಪ ಅಜ್ಜಾಳ ಬಿನ್ ಹನುಮಂತಪ್ಪ, ಅಬಕಾರಿ ರಕ್ಷಕರು, ಅಬಕಾರಿ ನಿರೀಕ್ಷಕರ ಕಛೇರಿ, ಹರಿಹರ ವಲಯ, ಹರಿಹರ, ದಾವಣಗೆರೆ ಜಿಲ್ಲೆ ಇವರನ್ನು ನೆರಳು ಸಾಕ್ಷಿಯಾಗಿ ನೇಮಿಸಿ ದೂರುದಾರರೊಂದಿಗೆ ಎದುರುದಾರರ ಬಳಿ ಹೋಗಿ ಅವರಿಗೆ ಅನುಮಾನ ಬಾರದಂತೆ ಮತ್ತು ಎದುರುದಾರರು ಹಾಗೂ ದೂರುದಾರರ ನಡುವೆ ನಡೆದ ಸಂಭಾಷಣೆಯನ್ನು ಕೇಳಿಸಿಕೊಂಡು, ಘಟನೆಯನ್ನು ವೀಕ್ಷಿಸಿ, ಎದುರುದಾರರು ಹಣವನ್ನು ಕೇಳಿ ಪಡೆದುಕೊಂಡರೆ, ಹಣವನ್ನು ಹೇಗೆ ಪಡೆದುಕೊಳ್ಳುತ್ತಾರೆ, ಹಣವನ್ನು ಎಲ್ಲಿ ಇಟ್ಟುಕೊಳ್ಳುತ್ತಾರೆ ಎಂಬುದನ್ನು ಗಮನಿಸಿ ನಂತರ ತಿಳಿಸಬೇಕೆಂದು, ತನಿಖಾಧಿಕಾರಿಗಳು ವಾಯ್ಸ್ ರೆಕಾರ್ಡರ್‌ನ್ನು ನೀಡಿ, ಧ್ವನಿ ಸಂಭಾಷಣೆಯನ್ನು ರೆಕಾರ್ಡ್ ಮಾಡಲು ದೂರುದಾರರಿಗೆ ತಿಳಿಸಿರುತ್ತಾರೆ. ದೂರುದಾರರಿಗೆ ಎದುರುದಾರರು ಲಂಚದ ಹಣ ಬೇಡಿಕೆ ಇಟ್ಟು ಸ್ವೀಕರಿಸಿದ ನಂತರ ತನ್ನ ತಲೆಯನ್ನು ಕೆರೆದುಕೊಳ್ಳುವ ಮೂಲಕ ಸಂಜ್ಞೆ ನೀಡಬೇಕೆಂದು ಸೂಚಿಸಿರುತ್ತಾರೆ. ಈ ಬಗ್ಗೆ ಸವಿಸ್ತಾರ ಪ್ರಾಯೋಗಿಕ ಪಂಚನಾಮೆಯನ್ನು ನಿರ್ವಹಿಸಿರುತ್ತಾರೆ.

4) ತನಿಖಾಧಿಕಾರಿಗಳು ಠಾಣೆಯಿಂದ ದೂರುದಾರರು, ಪಂಚ ಸಾಕ್ಷಿಗಳು ಹಾಗೂ ಸಿಬ್ಬಂದಿಯವರೊಂದಿಗೆ ದಿನಾಂಕ 28/02/2019 ರಂದು ದಾವಣಗೆರೆ ತಾಲ್ಲೂಕು ಮಾಯಕೊಂಡ ಗ್ರಾಮದಲ್ಲಿರುವ ನಾಡಕಛೇರಿಗೆ ಹೋಗಿದ್ದು, ದೂರುದಾರರ ಜೊತೆ ನೆರಳು ಸಾಕ್ಷಿ ಶ್ರೀ ಬೀರಪ್ಪ ಅಜ್ಜಾಳ ಬಿನ್ ಹನುಮಂತಪ್ಪ ಇವರ ಸಮಕ್ಷಮ ಎದುರುದಾರರು ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದು, ಅದಕ್ಕೆ ದೂರುದಾರರು ಲಂಚವಾಗಿ ಕೊಡಬೇಕಾಗಿದ್ದ ಪಿನಾಪ್ತಲಿನ್ ಪೌಡರ್ ಲೇಪಿತ ರೂಪಾಯಿ ನಾಲ್ಕು ಸಾವಿರ ಗಳನ್ನು ಎದುರುದಾರರಿಗೆ ಕೊಟ್ಟಾಗ, ಅವರು ಹಣವನ್ನು ಬಲಗೈಯಿಂದ ತೆಗೆದುಕೊಂಡು, ಎರಡೂ ಕೈಗಳಿಂದ ಎಣಿಸಿ ತನ್ನ ಪ್ಯಾಂಟಿನ ಬಲಗಡೆ ಜೇಬಿನಲ್ಲಿ ಇಟ್ಟುಕೊಂಡಿರುತ್ತಾರೆ. ಆಗ ದೂರುದಾರರು ನಾಡಕಛೇರಿಯಿಂದ ಹೊರಗೆ ಬಂದು ತಲೆ ಕೆರೆದುಕೊಳ್ಳುವುದರ ಮೂಲಕ ತನಿಖಾಧಿಕಾರಿಗಳಿಗೆ ಸಂಜ್ಞೆ ನೀಡಿರುತ್ತಾರೆ. ಆಗ ತನಿಖಾಧಿಕಾರಿಗಳು, ಸಹ ಪಂಚ ಮತ್ತು ಸಿಬ್ಬಂಧಿಯವರೊಂದಿಗೆ

ಎದುರುದಾರರ ಕಛೇರಿಯ ಒಳಗೆ ಬಂದು, ತಮ್ಮ ಗುರುತಿನ ಚೀಟಿಯನ್ನು ತೋರಿಸಿ, ತಮ್ಮ ಹಾಗೂ ಪಂಚರ ಪರಿಚಯ ಮಾಡಿಕೊಂಡು, ಎದುರುದಾರರ ಹೆಸರು, ವಿಳಾಸ ಕೇಳಿ ಪಡೆದುಕೊಂಡಿರುತ್ತಾರೆ. ನಂತರ ತನಿಖಾಧಿಕಾರಿಗಳು ಠಾಣೆಯಿಂದ ತಂದಿದ್ದ ಸೋನಿ ವಾಯ್ಸ್ ರೆಕಾರ್ಡರ್‌ನಲ್ಲಿ ದೂರುದಾರರ ಮತ್ತು ಎದುರುದಾರರ ನಡುವೆ ನಡೆದ ನೇರ ಸಂಭಾಷಣೆಯನ್ನು ಎದುರುದಾರರಿಗೆ ಕೇಳಿಸಿ, ಎದುರುದಾರರ ಎರಡೂ ಕೈಗಳನ್ನು ಪ್ರತ್ಯೇಕವಾಗಿ ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿ ತೊಳೆದಾಗ ಸದರಿ ದ್ರಾವಣವು ತಿಳಿ ಗುಲಾಬಿ ಬಣ್ಣಕ್ಕೆ ತಿರುಗಿದ್ದು ಇರುತ್ತದೆ. ಸದರಿ ದ್ರಾವಣಗಳನ್ನು ಪ್ರತ್ಯೇಕ ಪ್ಲಾಸ್ಟಿಕ್ ಬಾಟಲ್‌ಗಳಲ್ಲಿ ಸಂಗ್ರಹಿಸಿ ಸೀಲ್ ಮಾಡಿ ವಶಪಡಿಸಿಕೊಂಡಿರುತ್ತಾರೆ. ಎದುರುದಾರರಿಗೆ ಬದಲಿ ಪ್ಯಾಂಟಿನ ವ್ಯವಸ್ಥೆ ಮಾಡಿ, ಆತನು ಧರಿಸಿದ್ದ ಪ್ಯಾಂಟನ್ನು ಕಳಚಿಕೊಂಡು ಪಿನಾಪ್ತಲಿನ್ ಪೌಡರ್ ಲೇಪಿತ ಲಂಚದ ಹಣ ಇಟ್ಟುಕೊಂಡಂತಹ ಜೇಬನ್ನು ಹೊರಭಾಗಕ್ಕೆ ತೆಗೆದು ಸೋಡಿಯಂ ಕಾರ್ಬೋನೇಟ್ ದ್ರಾವಣದಲ್ಲಿ ಅದ್ದಿದಾಗ ಅದು ತಿಳಿ ಗುಲಾಬಿ ಬಣ್ಣಕ್ಕೆ ಬಂದಿರುತ್ತದೆ. ಎದುರುದಾರರು ಲಂಚದ ಹಣ ಪಡೆದ ನೋಟುಗಳನ್ನು ಪರಿಶೀಲಿಸಲಾಗಿ, ಅವುಗಳ ಮೌಲ್ಯ, ನೋಟುಗಳ ಸಂಖ್ಯೆ ಇವು ಪ್ರಾಯೋಗಿಕ ಪಂಚನಾಮೆಯಲ್ಲಿ ಬರೆದಂತಹ ನೋಟುಗಳ ಸಂಖ್ಯೆ ಮತ್ತು ಮೌಲ್ಯಕ್ಕೆ ತಾಳೆಯಾಗಿರುತ್ತವೆ. ಅವುಗಳನ್ನು ತನಿಖಾಧಿಕಾರಿಗಳು ವಶಪಡಿಸಿ ಕೊಂಡಿರುತ್ತಾರೆ. ಟ್ರ್ಯಾಪ್ ಕಾಲದಲ್ಲಿ ದೂರುದಾರರು ಎದುರುದಾರರೊಂದಿಗೆ ನಡೆಸಿದ ಸಂಭಾಷಣೆಯನ್ನು ವಾಯ್ಸ್ ರೆಕಾರ್ಡರ್‌ನಲ್ಲಿ ರೆಕಾರ್ಡ್ ಮಾಡಿಕೊಂಡಿದ್ದು, ಅದನ್ನು ಕಂಪ್ಯೂಟರಿಗೆ ಅಳವಡಿಸಿ ಕೇಳಿ ಅರಿತು ಲಿಪೀಕರಣ ಮಾಡಿ, ಸಿ.ಡಿ.ಗೆ ವರ್ಗಾಯಿಸಿ, ಸಿ.ಡಿ.ಗಳನ್ನು ವಶಪಡಿಸಿ ಕೊಂಡಿರುತ್ತಾರೆ. ಎದುರುದಾರರಿಗೆ ತಮ್ಮ ಸ್ವರಕ್ಷಾ ಪತ್ರ ಬರೆದುಕೊಡುವಂತೆ ನೋಟೀಸ್ ನೀಡಿದ್ದರ ಮೇರೆಗೆ ಎದುರುದಾರರು ಘಟನೆ ಬಗ್ಗೆ ತಮ್ಮ ಸಮಜಾಯಿಷಿಯನ್ನು ನೀಡಿರುತ್ತಾರೆ. ಸದರಿ ಸಮಜಾಯಿಷಿಯಲ್ಲಿ "ಶ್ರೀ ರವಿಕುಮಾರ ಬಿನ್ ಸಿದ್ದಲಿಂಗಪ್ಪ ಅಣಬೇರು ಗ್ರಾಮದಲ್ಲಿ ವಾಸವಾಗಿರುತ್ತಾರೆ. ನನ್ನ ಗ್ರಾಮ ಸ್ವಂತ ಊರು 2 ಕಿ.ಮೀ ಪಕ್ಕದ ನಲ್ಕುಂದ ಇವರು ನನಗೆ ಬಹಳ ದಿನಗಳಿಂದ ಪರಿಚಯ, ಇವರ ಮನೆತನದ ಸುಖಗಳನ್ನು ನನ್ನ ಬಳಿ ಹೇಳಿಕೊಳ್ಳುತ್ತಿದ್ದರು. ಅವರ ಕಷ್ಟ ನೋಡಿ ನಾನು 04 ತಿಂಗಳ ಹಿಂದೆ, ನನ್ನ

ಗೆಳೆಯನ ಹತ್ತಿರ, ಸಾಲವಾಗಿ 6000/- ರೂ. ಕೊಡಿಸಿರುತ್ತೇನೆ. (ಸಾಲದ ಹಣವನ್ನು ಬೇಗ ಕೊಡಪ್ಪ ಅಂತಾ ಬಹಳ ಸಾರಿ ಕೇಳಿದೆ. ನನ್ನ ಹತ್ತಿರ ಹಣ ಇಲ್ಲಾ ಕೊಡುತ್ತೇನೆ ಎಂದು ಅವರಿಗೆ, ನನಗೆ ಬಹಳ ವಾದ ವಿವಾದ ನಡೆಯಿತು. ನಾನು ಕಷ್ಟದಲ್ಲಿ ಹಣ ಕೊಡಿಸಿರುತ್ತೇನೆ, ಕೆಟ್ಟದ್ದಾಗಿ ನನ್ನ ಹತ್ತಿರ ಹಣವಿಲ್ಲ ಎಂದು ಏಕವಚನದಲ್ಲಿ ಮಾತನಾಡಿದ್ದಕ್ಕೆ ನಾನು ಕೊಡಿಸಿದ ಹಣ ಕೊಡಪ್ಪ ಕೊಟ್ಟು ಸುಮ್ಮನೆ ಹೋಗು ಎಂದು ಜೋರು ಮಾಡಿರುತ್ತೇನೆ. ಆದ್ದರಿಂದ ನನ್ನನ್ನು ಎಸಿಬಿ ಪೊಲೀಸರನ್ನು ಕರೆದುಕೊಂಡು ಬಂದ ಲಂಚ ಎಂದು ಎಸಿಬಿ ರವರಿಗೆ ತಪ್ಪು ಮಾಹಿತಿ ನೀಡಿ, ನನ್ನನ್ನು ಮೋಸದಿಂದ ಹಣಕೊಟ್ಟಿರುತ್ತಾರೆ ಮತ್ತು ನನ್ನ ಮೇಲೆ ದ್ವೇಷಕ್ಕೆ ಎಸಿಬಿ ಅಧಿಕಾರಿಗಳಿಗೆ ತಪ್ಪು ಸಂದೇಶ ನೀಡಿ, ನನಗೆ ಮೋಸ ಮಾಡಿರುತ್ತಾರೆ. ದಯವಿಟ್ಟು ನಾನು ಯಾವಾಗಲೂ, ನಾನು ಸರ್ಕಾರಿ ಕೆಲಸಕ್ಕೆ ಸೇರಿದಾಗಿನಿಂದ ಎಂದೂ ಲಂಚದ ಬೇಡಿಕೆ ಇಟ್ಟಿಲ್ಲ, ರವಿಕುಮಾರ ರವರಿಗೆ ಲಂಚ ಕೊಡು ಎಂದು ಕೇಳಿರುವುದಿಲ್ಲ" ಎಂದು ಸಮಜಾಯಿಷಿ ನೀಡಿರುತ್ತಾರೆ. ತನಿಖಾಧಿಕಾರಿಗಳು ಈ ಪ್ರಕರಣಕ್ಕೆ ಸಂಬಂಧಪಟ್ಟ ದಾಖಲಾತಿಗಳನ್ನು ಉಪತಹಸೀಲ್ದಾರ್ ಶ್ರೀ ಬಿ. ಲೋಕೇಶ್ ರವರ ಮುಖಾಂತರ ಮೂಲ ದಾಖಲಾತಿಗಳ ಜೆರಾಕ್ಸ್ ಪ್ರತಿಗಳನ್ನು ದೃಢೀಕರಿಸಿ ಪಡೆದುಕೊಂಡಿರುತ್ತಾರೆ. ಸದರಿ ಹಣದ ಬಗ್ಗೆ ತನಿಖಾಧಿಕಾರಿಯವರು ಎದುರುದಾರರನ್ನು ವಿಚಾರಿಸಿದಾಗ ಸರಿಯಾದ, ತೃಪ್ತಿದಾಯಕವಾದ ಉತ್ತರ ಅಥವಾ ವಿವರಣೆ ಅಥವಾ ಲೆಕ್ಕ ನೀಡಿರುವುದಿಲ್ಲ ಹಾಗೂ ಸಾಲ ನೀಡಿದ ಬಗ್ಗೆ ಸೂಕ್ತ ದಾಖಲಾತಿಯನ್ನು ಹಾಜರುಪಡಿಸಿರುವುದಿಲ್ಲ. ಸದರಿ ಸಮಜಾಯಿಷಿಯು ಪೂರಕ ಸಮಜಾಯಿಷಿಯಾಗಿರದೆ ವ್ಯತಿರಿಕ್ತವಾಗಿದ್ದರಿಂದ ಅವುಗಳನ್ನು ಒಪ್ಪಲು ಬರಲಾರದು. ಅಮಾನತ್ ಪಂಚನಾಮೆ ಕಾಲದಲ್ಲಿ ಹಂತ ಹಂತವಾಗಿ ಫೋಟೋಗಳನ್ನು ತೆಗೆಸಿರುತ್ತಾರೆ. ನಂತರ ತನಿಖಾಧಿಕಾರಿಗಳು, ನೆರಳು ಸಾಕ್ಷಿ, ಸಹ ಪಂಚ ಅವರಿಂದ ಅಲ್ಲಿಯ ನಡುವಳಿಕೆಗಳನ್ನು ತಿಳಿದು ಸವಿಸ್ತಾರ ಜಪ್ತಿ ಪಂಚನಾಮೆ ನಿರ್ವಹಿಸಿ, ದೂರುದಾರರ ಹಾಗೂ ಪಂಚರ ಸಮಕ್ಷಮ ಸದರಿ ಹಣವನ್ನು ತನಿಖಾಧಿಕಾರಿಗಳು ವಶಪಡಿಸಿಕೊಂಡಿರುತ್ತಾರೆ.

5) ತನಿಖಾಧಿಕಾರಿಯವರು ಸವಿಸ್ತಾರ ಜಪ್ತಿ ಪಂಚನಾಮೆ ಪೂರೈಸಿದ ನಂತರ ಎದುರುದಾರರನ್ನು ದಸ್ತಗಿರಿ ಮಾಡಿರುತ್ತಾರೆ.

6) ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ದುರ್ನಡತೆಯನ್ನು ತೋರಿಸುತ್ತದೆ.

7) ಎದುರುದಾರರು ಪರಿವೀಕ್ಷಣಾ ಟಿಪ್ಪಣಿಗೆ ತಮ್ಮ ಸಮಜಾಯಿಷಿಯನ್ನು ದಿನಾಂಕ 26/10/2021 ರಂದು ಸಲ್ಲಿಸಿರುತ್ತಾರೆ. ಸದರಿ ಸಮಜಾಯಿಷಿಯನ್ನು ಪರಿಶೀಲಿಸಲಾಗಿ ಎದುರುದಾರರು ಈ ಪ್ರಕರಣದ ಸಂಪೂರ್ಣ ವಿಷಯವನ್ನು ನಿರಾಕರಿಸಿದ್ದು "ದೂರುದಾರರಿಗೆ, ಸಾಕ್ಷಿದಾರರ ಹೇಳಿಕೆಗಳು ಹಾಗೂ ತನಿಖಾಧಿಕಾರಿಯವರು ಸಂಗ್ರಹಿಸಿದ ದಾಖಲೆ ಮತ್ತು ಇತರೆ ಅಂಶಗಳು ದೂರುದಾರ ಮತ್ತು ತನಿಖಾಧಿಕಾರಿಯವರ ಸೃಷ್ಠಿಯಾಗಿದ್ದು, ನಾನು ಯಾವುದೇ ದುರ್ನಡತೆಯನ್ನು ತೋರಿಸಿರುವುದಿಲ್ಲವೆಂದು ತಿಳಿಸಿದ್ದು, ಇದರ ಜೊತೆ ಎದುರುದಾರರು ತಮ್ಮ ಮೇಲೆ ಜಿಲ್ಲಾ ಮತ್ತು ಶಿಸ್ತು ಪ್ರಾಧಿಕಾರ, ದಾವಣಗೆರೆ ಜಿಲ್ಲೆ ಇವರು ನೋಟೀಸು ಹಾಗೂ ದೋಷಾರೋಪಣಾ ಪಟ್ಟಿಯ ಮೂಲಕ ಇಲಾಖಾ ವಿಚಾರಣೆಗೆ ಆದೇಶಿಸಿರುವುದರಿಂದ ಈ ಇಲಾಖಾ ವಿಚಾರಣೆ, ವಿಚಾರಣಾ ಹಂತದಲ್ಲಿರುವಾಗ ಇದೇ ಆಪಾದನೆಗಳಿಗೆ ಸಂಬಂಧಿಸಿದಂತೆ ಪುನಃ ನನ್ನ ವಿರುದ್ಧ ಕರ್ನಾಟಕ ಲೋಕಾಯುಕ್ತ ಸಂಸ್ಥೆಯವರು ಇಲ್ಲಾಖಾ ವಿಚಾರಣೆ ನಡೆಸಲು ಮುಂದಾಗಿರುವುದು ಒಂದೇ ತಪ್ಪಿಗೆ ಎರಡು ಬಾರಿ ಶಿಕ್ಷೆ ವಿಧಿಸುವ ಪ್ರಕ್ರಿಯೆಯಾಗಿದ್ದು ಇದು ಭಾರತ ಸಂವಿಧಾನದ ಆರ್ಟಿಕಲ್ 20(2) ರ ಸ್ಪಷ್ಟ ಉಲ್ಲಂಘನೆಯಾಗಿರುತ್ತದೆ. ಆದ ಪ್ರಯುಕ್ತ ಕಾನೂನು ಸಮಾನತೆ ಮತ್ತು ಸಹಜ ಹಿತದೃಷ್ಠಿಯಿಂದ ನನ್ನ ಮೇಲೆ ನಡೆಸಲು ಉದ್ದೇಶಿಸಿರುವ ಇಲಾಖಾ ವಿಚಾರಣೆಯನ್ನು ಸ್ಥಗಿತಗೊಳಿಸಲು ಕೋರುತ್ತೇನೆ" ಎಂದು ಸಮಜಾಯಿಷಿ ನೀಡಿರುತ್ತಾರೆ. ತಮ್ಮ ಸಮಜಾಯಿಷಿಯ ಜೊತೆ ಕೆ.ಸಿ.ಎಸ್.(ಸಿಸಿಎ) ನಿಯಮ 11 (4) ರ ಅಡಿಯಲ್ಲಿ ಜಿಲ್ಲಾಧಿಕಾರಿ ಮತ್ತು ಶಿಸ್ತು ಪ್ರಾಧಿಕಾರಿ, ದಾವಣಗೆರೆ ಜಿಲ್ಲೆ, ದಾವಣಗೆರೆ ಇವರು ನೀಡಿದ ನೋಟಿಸಿನ ಜೆರಾಕ್ಸ್ ದೃಢೀಕೃತ ಪ್ರತಿ, ಎದುರುದಾರರ ಮೇಲೆ ಆರೋಪ ಇರುವ ಅನುಬಂಧ 1 ರಿಂ 4 ರ ಆರೋಪ ಪ್ರಕರಣ ಸಂಖ್ಯೆ

ಸಿಸಿಎ:ಸಿಆರ್-03:2021-22 ರ ಜೆರಾಕ್ಸ್ ದೃಢೀಕೃತ ಪ್ರತಿ, ಎದುರುದಾರರ ಸದರಿ ಆರೋಪಕ್ಕೆ ಅನುಬಂಧ 1 ರಿಂದ 4 ಕ್ಕೆ ಪ್ರತಿ ರಕ್ಷೆಯ ಲಿಖಿತ ಹೇಳಿಕೆಯ ಜೆರಾಕ್ಸ್ ಪ್ರತಿ ಸಲ್ಲಿಸಿರುತ್ತಾರೆ. ಪರಿವೀಕ್ಷಣಾ ಟಿಪ್ಪಣಿಗೆ ನೀಡಿದ ಸಮಜಾಯಿಷಿಗಳಲ್ಲಿ ಆಪಾದನೆಗಳನ್ನು ನಿರಾಕರಿಸಿರುವುದರ ಹೊರತಾಗಿ ಆಪಾದನೆಗಳನ್ನು ಅಲ್ಲಗೆಳೆಯಲು ಯಾವುದೇ ಪೂರಕ ದಾಖಲಾತಿಗಳನ್ನು ಸಲ್ಲಿಸಿರುವುದಿಲ್ಲ. ಆದರೆ ಎದುರುದಾರರ ವಿರುದ್ಧ ಈಗಾಗಲೇ ಜಿಲ್ಲಾಧಿಕಾರಿ ಹಾಗೂ ಶಿಸ್ತು ಪ್ರಾಧಿಕಾರಿ, ದಾವಣಗೆರೆ ಜಿಲ್ಲೆ, ದಾವಣಗೆರೆ ಪ್ರಕರಣ ಸಂಖ್ಯೆ ಸಿಸಿಎ:ಸಿಆರ್-03:2021-22 ದಿ: 17/08/2021 ರಂದು ಇಲಾಖಾ ವಿಚಾರಣೆ ಪ್ರಕ್ರಿಯೆಯಲ್ಲಿರುವುದು ಕಂಡುಬರುತ್ತದೆ. ಆದರೆ ಸದರಿ ಇಲಾಖಾ ವಿಚಾರಣೆ ಯಾವ ಹಂತದಲ್ಲಿದೆ ಅಥವಾ ವಿಚಾರಣೆ ಮುಕ್ತಾಯವಾಗಿರುವ ಬಗ್ಗೆ ಮೇಲ್ನೋಟಕ್ಕೆ ಕಂಡುಬರುವುದಿಲ್ಲ. ಆದ್ದರಿಂದ ಎದುರುದಾರರು ನೀಡಿರುವ ಸಮಜಾಯಿಷಿ ಅಂಶಗಳ ಮೇರೆಗೆ ಪ್ರಕರಣವನ್ನು ಮುಕ್ತಾಯಗೊಳಿಸಲು ಸೂಕ್ತ ಕಾರಣಗಳು ಕಂಡುಬರುವುದಿಲ್ಲ. ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ, ತನಿಖಾಧಿಕಾರಿ ಸಂಗ್ರಹಿಸಿದ ದಾಖಲೆ, ಧ್ವನಿ ವಿಶ್ಲೇಷಣಾ ವರದಿ, ರಾಸಾಯನಿಕ ತಜ್ಞರ ಪರೀಕ್ಷಾ ವರದಿ ಮತ್ತು ತನಿಖಾಧಿಕಾರಿಗಳು ಸಂಗ್ರಹಿಸಿದ ಮುದ್ದೇ ಮಾಲುಗಳಲ್ಲಿ ಪಿನಾಪ್ತಲಿನ್ ಅಂಶ ಇವುಗಳನ್ನು ಪರಿಶೀಲಿಸಿದಾಗ ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಟತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ.

8) ಅದಲ್ಲದೆ ಎದುರುದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ (ಪ್ರಸ್ತುತ ಕರ್ನಾಟಕ ನಾಗರಿಕ ಸೇವಾ(ನಡತೆ)

ಅಧಿಕಾರದಡಿ, ಈಗ, ಈ ವರದಿ ಮೂಲಕ ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ ಹಾಗೂ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957 ರ ನಿಯಮ 14(ಎ) ರಡಿ ಈ ಸಂಸ್ಥೆಗೆ ವಹಿಸಬೇಕೆಂದೂ ಕೋರಿದೆ.

9) ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಮೂರು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

2/2/22

(ನ್ಯಾಯಮೂರ್ತಿ ಬಿ.ಎಸ್. ಪಾಟೀಲ್)
ಉಪಲೋಕಾಯುಕ್ತರು
ಕರ್ನಾಟಕ ರಾಜ್ಯ, ಬೆಂಗಳೂರು.